# Akashvani : Bangalore
# National Bulletin In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**23.04.2024 / 19.35 hrs**

<u>ಮುಖ್ಯಾಂಶಗಳು</u>

೧. ೨೦೨೪ರ ಸಾರ್ವತ್ರಿಕ ಚುನಾವಣೆ; ಎರಡನೇ ಹಂತದ ೧೩ ರಾಜ್ಯಗಳ ೮೯ ಕ್ಷೇತ್ರಗಳಲ್ಲಿ ಬಿರುಸಿನ ಪ್ರಚಾರ

೨. ಕರ್ನಾಟಕದಲ್ಲಿ ರಾಜಕೀಯ ಪಕ್ಷಗಳ ಮುಖಂಡರಿಂದ ರೋಡ್ ಶೋ ಮೂಲಕ ಮತಯಾಚನೆ

೩. ಕರ್ನಾಟಕದ ೧೪ ಕ್ಷೇತ್ರಗಳಲ್ಲಿ ಬರುವ ೨೬ ರಂದು ಮತದಾನಕ್ಕೆ ಸಕಲ ಸಿದ್ಧತೆ

೪. ವಿಶ್ವ ಬಿಲ್ಲುಗಾರಿಕೆ ಪಂದ್ಯಾವಳಿ ಶಾಂಘೈನಲ್ಲಿಂದು ಆರಂಭ- ದೇಶದ ೧೬ ಕ್ರೀಡಾಪಟುಗಳು ಭಾಗಿ

೫. ಐಪಿಎಲ್ ಟಿ-೨೦ ಕ್ರಿಕೆಟ್; ಚೆನ್ನೈ ಸೂಪರ್ ಕಿಂಗ್ಸ್ - ಲಖನೌ ಸೂಪರ್ ಜೈಂಟ್ಸ್ ಮುಖಾಮುಖಿ

**<><*<><>*><>**

೨೦೨೪ರ ಸಾರ್ವತ್ರಿಕ ಚುನಾವಣೆಯ ಎರಡನೇ ಹಂತದ ಪ್ರಚಾರ ಕಾರ್ಯ ರಂಗೇರಿದೆ. ೧೩ ರಾಜ್ಯಗಳ ೮೯ ಕ್ಷೇತ್ರಗಳಲ್ಲಿ ಬಹಿರಂಗ ಪ್ರಚಾರಕ್ಕೆ ನಾಳೆ ಸಂಜೆ ತೆರೆ ಬೀಳಲಿದೆ. ರಾಜಕೀಯ ಪಕ್ಷಗಳ ನಾಯಕರು, ತಮ್ಮ ತಮ್ಮ ಅಭ್ಯರ್ಥಿಗಳ ಪರ ರೋಡ್ ಶೋ ಮೂಲಕ ಮತಯಾಚನೆ ಮಾಡಿದರು. ಇನ್ನು ಹಲವು ಮುಖಂಡರು ಬಹಿರಂಗ ಪ್ರಚಾರ ನಡೆಸಿ, ತಮ್ಮ ಸಾಧನೆಗಳ, ಭರವಸೆಗಳ ಪಟ್ಟಿಯನ್ನು ಸಾರ್ವಜನಿಕರಿಗೆ ಬಿಡುಗಡೆ ಮಾಡಿದರು. ಕೇಂದ್ರದಲ್ಲಿರುವ ಎನ್‌ಡಿಎ ಮೈತ್ರಿಕೂಟದ ಅಭ್ಯರ್ಥಿಗಳು, ಸರ್ಕಾರದ ಸಾಧನೆಯನ್ನು ಜನರ ಮುಂದಿಟ್ಟು ಮತಯಾಚಿಸಿದರು. ಕಾಂಗ್ರೆಸ್, ಆಮ್‌ಆದ್ಮಿ ಪಕ್ಷ, ಬಿಎಸ್‌ಪಿ, ಸಮಾಜವಾದಿ ಪಕ್ಷ ಸೇರಿದಂತೆ ಪ್ರಾದೇಶಿಕ ಪಕ್ಷಗಳ ಮುಖಂಡರು ಅಭ್ಯರ್ಥಿಗಳ ಪರ ಮತಯಾಚಿಸಿದರು. ಬಿಜೆಪಿ ಧುರೀಣ, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ರಾಜಸ್ಥಾನ ರಾಜ್ಯದ ಚುನಾವಣಾ ಪ್ರಚಾರ ರ್‍ಯಾಲಿಯಲ್ಲಿ ಪಾಲ್ಗೊಂಡು, ಪಕ್ಷದ ಅಭ್ಯರ್ಥಿ ಪರ ಮತಯಾಚಿಸಿದರು. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ಮೀಸಲಾತಿ ಪ್ರಮಾಣ ರದ್ದಾಗುವುದಿಲ್ಲ ಎಂದು ಅವರು, ತುಳಿತಕ್ಕೊಳಗಾದ ಜನರ ರಕ್ಷಣೆಗೆ ತಮ್ಮ ಪಕ್ಷ ಬದ್ಧವಾಗಿದೆ ಎಂದು ಹೇಳಿದರು. ಎಲ್ಲ ವರ್ಗದವರಿಗೂ ಸಮಾನ ನ್ಯಾಯ ಕಲ್ಪಿಸಲು ಪ್ರಾಮಾಣಿಕ ಪ್ರಯತ್ನ ಮಾಡಿರುವುದಾಗಿ ಪ್ರಧಾನಿ ನರೇಂದ್ರ ಮೋದಿ ಅವರು, ಬಹಿರಂಗ ಪ್ರಚಾರದಲ್ಲಿ ಸರ್ಕಾರದ ಸಾಧನೆಯ ಮಾಹಿತಿಯನ್ನು ಜನತೆ ಮುಂದಿಟ್ಟರು. ಬಿಜೆಪಿ ಹಿರಿಯ ನಾಯಕ ಅಮಿತ್ ಶಾ ಅವರು, ಕಾಂಗ್ರೆಸ್ ಮುಖಂಡ ಪಿ.ಚಿದಂಬರಂ ಅವರ ಹೇಳಿಕೆಯನ್ನು ತಳ್ಳಿಹಾಕಿ, ದೇಶಾದ್ಯಂತ ನೂತನ ಅಪರಾಧ ಕಾನೂನು ಜಾರಿಯಿಂದ ಸಾರ್ವಜನಿಕರಿಗೆ ಅನುಕೂಲವಾಗಲಿದೆ. ಈಗಾಗಲೇ ನ್ಯಾಯಾಂಗ ವ್ಯವಸ್ಥೆ ಸಹ ನೂತನ ಕಾನೂನು ಜಾರಿಗೆ ಸಹಮತ ಸೂಚಿಸಿದೆ ಎಂದು ಬಲವಾಗಿ ಸಮರ್ಥಿಸಿಕೊಂಡರು. ಕೇಂದ್ರ ತಂದಿರುವ ಕಾನೂನನ್ನು ವಾಪಸ್ ಪಡೆಯುವ ಅಧಿಕಾರ ಸಂಸತ್‌ಗೆ ಮಾತ್ರ ಇದೆ. ಯಾವುದೇ ಒಂದು ರಾಜಕೀಯ ಪಕ್ಷ ಮನಬಂದತೆ ಹೇಳಿಕೆ ನೀಡುವಂತಿಲ್ಲ ಎಂದು ಅಮಿತ್ ಶಾ ಪ್ರತಿಪಾಧಿಸಿದರು. ಕಾಂಗ್ರೆಸ್ ಮುಖಂಡರು, ದಕ್ಷಿಣ ರಾಜ್ಯಗಳಲ್ಲಿ ಬಹಿರಂಗ ಪ್ರಚಾರ ಮಾಡಿ, ಪಕ್ಷದ ಅಭ್ಯರ್ಥಿಗಳ ಪರ ರೋಡ್ ಶೋ ಮೂಲಕ ಅಬ್ಬರದ ಪ್ರಚಾರ ನಡೆಸಿದರು ಎಂದು ವರದಿಯಾಗಿದೆ. ಬಿಜೆಪಿ ಹಿರಿಯ ಧುರೀಣ, ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು, ಗೌತಮ್ ಬುದ್ಧ ನಗರದಲ್ಲಿ ಪಕ್ಷದ ಅಭ್ಯರ್ಥಿ ಪರ ಪ್ರಚಾರ ನಡೆಸಿದರು. ಇನ್ನೋರ್ವ ಹಿರಿಯ ನಾಯಕ, ಯೋಗಿ ಆದಿತ್ಯನಾಥ್ ಅವರೂ ಸಹ ಮತಯಾಚನೆ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ಇದೇ ೨೬ ರಂದು ಈ ಕ್ಷೇತ್ರದಲ್ಲಿ ಮತದಾನ ನಡೆಯಲಿದೆ. ಆಮ್‌ಆದ್ಮಿ ಪಕ್ಷದ ರಾಜ್ಯ ಘಟಕದ ಅಧ್ಯಕ್ಷ ಮುಖ್ಯಮುಂತ್ರಿಚಂದ್ರು, ಕಾಂಗ್ರೆಸ್ ಮುಖಂಡರ ಜೊತೆ ವೇದಿಕೆಯಲ್ಲಿ ಪಾಲ್ಗೊಂಡಿದ್ದರು.

**<><*<><>*><>**

೨೦೨೪ರ ಸಾರ್ವತ್ರಿಕ ಚುನಾವಣೆಗೆ ಬಹಿರಂಗ ಪ್ರಚಾರ ರಂಗೇರಿದೆ. ರಾಜಕೀಯ ಪಕ್ಷಗಳ ಮುಖಂಡರು ಬಿರುಸಿನ ಪ್ರಚಾರ ನಡೆಸಿದರೆ, ಇನ್ನು ಕೆಲವು ಮುಖಂಡರು ರೋಡ್ ಮೂಲಕ ಸಾರ್ವಜನಿಕರಿಗೆ ಮತನೀಡುವಂತೆ ಮನವಿ ಮಾಡಿದರು. ಬಿಜೆಪಿ ಮುಖಂಡ ಅಮಿತ್ ಶಾ ಅವರು, ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದಲ್ಲಿ ರೋಡ್ ಶೋ ಮೂಲಕ ಬಹಿರಂಗ ಪ್ರಚರ ನಡೆಸಲಿದ್ದಾರೆ. ಕಾಂಗ್ರೆಸ್ ನಾಯಕಿ ಪ್ರಿಯಾಂಕ ಗಾಂಧಿ ವಾದ್ರಾ ಚಿತ್ರದುರ್ಗದಲ್ಲಿ ಪಕ್ಷದ ಅಭ್ಯರ್ಥಿ ಪರ ಮತಯಾಚಿಸಿದರು. ಕೇಂದ್ರದಲ್ಲಿರುವ ಎನ್‌ಡಿಎ ಸರ್ಕಾರ, ನಿರುದ್ಯೋಗ ಪ್ರಮಾಣ ಏರಿಕೆಗೆ ಕಾರಣವಾಗಿದ್ದು, ಅಡಿಗೆ ಅನಿಲ್ ಪೆಟ್ರೋಲ್ ಡೀಸೆಲ್ ಸೇರಿದಂತೆ ಅಗತ್ಯ ವಸ್ತುಗಳ ದರ ಏರಿಕೆಯಿಂದ ಜನಸಾಮಾನ್ಯರು ತತ್ತರಿಸಿ ಹೋಗಿದ್ದಾರೆ. ಬಿಜೆಪಿಯೇತರ ರಾಜ್ಯ ಸರ್ಕಾರಗಳಿಗೆ ಅಗತ್ಯ ನೆರವನ್ನು ನೀಡುವಲ್ಲಿ ವಿಫಲರಾಗಿದ್ದಾರೆ ಎಂದು ದೂರಿದರು. ಅವರೂ ಸಹ ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದಲ್ಲಿ ರೋಡ್ ಶೋ ನಡೆಸಲಿದ್ದಾರೆ ಎಂದು ವರದಿಯಾಗಿದೆ. ಬಿಜೆಪಿ ಹಿರಿಯ ಮುಖಂಡ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಮಾತನಾಡಿ, ನೇಹಾ ಹಿರೇಮಠ್ ಸಾವಿನ ಪ್ರಕರಣವನ್ನು ಸಿಬಿಐ ಗೆ ಒಪ್ಪಿಸಬೇಕು ಎಂದು ರಾಜ್ಯ ಸರ್ಕಾರವನ್ನು ಒತ್ತಾಯಿಸಿದರು. ಬಿಜೆಪಿ ರಾಜ್ಯಘಟಕದ ಅಧ್ಯಕ್ಷ ಮಾತನಾಡಿ, ರಾಜ್ಯದಲ್ಲಿ ಮಹಿಳೆಯರ ಸುರಕ್ಷತೆಗೆ ಸರ್ಕಾರ ಆದ್ಯತೆ ನೀಡಿಲ್ಲ ಎಂದು ಆರೋಪಿಸಿದರು. ಹುಬ್ಬಳ್ಳಿ ಘಟನೆಯನ್ನು ಸಿಬಿಐ ತನಿಖೆಗೆ ಒಪ್ಪಿಸಬೇಕು ಎಂದು ಆಗ್ರಹಿಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೂ ಸಹ ರಾಜ್ಯದ ಮೊದಲನೇ ಹಂತದ ಚುನಾವಣೆಯ ಕ್ಷೇತ್ರಗಳಲ್ಲಿ ಪಕ್ಷದ ಅಭ್ಯರ್ಥಿಗಳ ಪರವಾಗಿ ಮತಯಾಚಿಸಿದರು ಎಂದು ವರದಿಯಾಗಿದೆ. ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರು ಮಂಡ್ಯ ಜಿಲ್ಲೆಯ ಮದ್ದೂರಿನಲ್ಲಿ ಬಹಿರಂಗ ಪ್ರಚಾರ

ನಡೆಸಿ, ಎನ್‌ಡಿಎ ಮೈತ್ರಿಕೂಟಕ್ಕೆ ಮತನೀಡಬೇಕೆ ಎಂದು ಮನವಿ ಮಾಡಿದರು. ಕಾಂಗ್ರೆಸ್ ಮುಖಂಡ ರಣದೀಪ್ ಸಿಂಗ್ ಸುರ್ಜೇವಾಲ, ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಪಕ್ಷದ ಮುಖಂಡರು ವಿಧಾನಸೌಧದ ದಕ್ಷಿಣ ಭಾಗದಲ್ಲಿರುವ ಗಾಂಧಿ ಪ್ರತಿಮೆ ಮುಂದೆ ಪ್ರತಿಭಟನೆ ನಡೆಸಿ, ಕೇಂದ್ರ ಸರ್ಕಾರ, ರಾಜ್ಯದ ಬರ ಪರಿಹಾರದ ಹಣವನ್ನು ಬಿಡುಗಡೆ ಮಾಡುವಂತೆ ಆಗ್ರಹಿಸಿದರು.

<><*<><>*><>

ಕರ್ನಾಟಕದಲ್ಲಿ ಮೊದಲನೇ ಹಂತದ ಚುನಾವಣೆಗೆ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ರಾಜ್ಯ ಮುಖ್ಯ ಚುನಾವಣಾಧಿಕಾರಿಗಳ ಕಚೇರಿ ತಿಳಿಸಿದೆ. ಮುಕ್ತ ಹಾಗೂ ನ್ಯಾಯಸಮ್ಮತ ಚುನಾವಣೆಗೆ ಸಿದ್ಧತೆ ಮಾಡಿಕೊಂಡಿದ್ದು, ಭದ್ರತೆಗಾಗಿ ಕೇಂದ್ರೀಯ ಮೀಸಲು ಪಡೆ ಹಾಗೂ ರಾಜ್ಯ ಮೀಸಲು ಪಡೆಗಳು ಜೊತೆಗೆ ಸಿಎಆರ್ ಪಡೆಗಳನ್ನು ನಿಯೋಜಿಸಲಾಗಿದೆ. ಸೂಕ್ಷ್ಮ ಮತ್ತು ಅತಿ ಸೂಕ್ಷ್ಮ ಮತಗಟ್ಟೆಗಳಲ್ಲಿ ವ್ಯಾಪಕ ಭದ್ರತೆ ಕೈಗೊಳ್ಳಲಾಗುತ್ತಿದೆ ಎಂದು ಮೂಲಗಳು ತಿಳಿಸಿವೆ. ಚುನಾವಣಾ ಸಿಬ್ಬಂದಿಗಳಿಗೆ ಅಗತ್ಯ ತರಬೇತಿ ನೀಡಿದ್ದು, ಇದೇ ೨೫ ರಂದು ಮಸ್ಟರಿಂಗ್ ಕಾರ್ಯ ನಡೆಯಲಿದೆ. ಎರಡನೇ ಹಂತದ ೧೪ ಲೋಕಸಭಾ ಕ್ಷೇತ್ರಗಳಲ್ಲಿ ೨೨೭ ಅಭ್ಯರ್ಥಿಗಳು ಕಣದಲ್ಲಿದ್ದಾರೆ. ನಿನ್ನೆ ನಾಮಪತ್ರ ವಾಪಸ್ ಪಡೆಯಲು ಕೊನೆಯದಿನವಾಗಿತ್ತು. ಮೇ ೭ ರಂದು ಈ ೧೪ ಕ್ಷೇತ್ರಗಳ ಚುನಾವಣೆಯ ಜೊತೆಗೆ ಸುರಪುರ ವಿಧಾನಸಭಾ ಕ್ಷೇತ್ರಕ್ಕೂ ಉಪ ಚುನಾವಣೆ ನಡೆಯಲಿದೆ. ಕಣದಲ್ಲಿ ೭ ಅಭ್ಯರ್ಥಿಗಳು ಆಯ್ಕೆ ಬಯಸಿ ನಾಮಪತ್ರ ಸಲ್ಲಿಸಿದ್ದಾರೆ ದಾವಣಗೆರೆಯಲ್ಲಿ ಅತಿ ಹೆಚ್ಚು ಅಭ್ಯರ್ಥಿಗಳು ಕಣದಲ್ಲಿದ್ದರೆ, ವಿಜಯಪುರದಲ್ಲಿ ಅತಿ ಕಡಿಮೆ ೮ ಅಭ್ಯರ್ಥಿಗಳು ಸ್ಪರ್ಧಿಸಿದ್ದಾರೆ ಎಂದು ರಾಜ್ಯ ಮುಖ್ಯ ಚುನಾವಣಾಧಿಕಾರಿಗಳ ಕಚೇರಿ ತಿಳಿಸಿದೆ.

<><*<><>*><>

ಕರ್ನಾಟಕದ ಲೋಕಸಭಾ ಚುನಾವಣೆಯ ಮೊದಲ ಹಂತದ ಮತದಾನಕ್ಕೆ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾ ಮುಖ್ಯ ಚುನಾವಣಾಧಿಕಾರಿಯೂ ಆಗಿರುವ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಹೇಳಿದ್ದಾರೆ. ೫ ಲೋಕಸಭಾ ಕ್ಷೇತ್ರದಲ್ಲಿ ಕಟ್ಟೆಚ್ಚರ ವಹಿಸಲಾಗಿದೆ. ೮ ಸಾವಿರದ ೯೮೪ ಮತಗಟ್ಟೆಗಳನ್ನು ಸ್ಥಾಪಿಸಲಾಗುತ್ತಿದೆ. ಇದರಲ್ಲಿ ೨ ಸಾವಿರದ ೩ ಮತಗಟ್ಟೆಗಳು ಸೂಕ್ಷ್ಮ ಮತಗಟ್ಟೆಗಳೆಂದು ಹಾಗೂ ೨೫೩ ಅತಿ ಸೂಕ್ಷ್ಮ ಮತಗಟ್ಟೆಗಳೆಂದು ಗುರುತಿಸಲಾಗಿದೆ. ೩೦ ವೆಚ್ಚ ವೀಕ್ಷಕರು ೩೦೫ ಮೈಕ್ರೋ ಅಬ್ಸರ್‌ವರ್ಸ್‌ಗಳನ್ನು ನೇಮಕಮಾಡಲಾಗಿದೆ. ೧೧ ಸಾವಿರದ ೭೯೪ ಸಿಆರ್‌ಪಿಎಫ್ ಪಡೆಗಳನ್ನು ನಿಯೋಜನೆ ಮಾಡಲಾಗಿದೆ ಎಂದು ಅವರು ತಿಳಿಸಿದರು. ಜೊತೆಗೆ ಸ್ಥಳೀಯ ಪೊಲೀಸ್ ಸಿಬ್ಬಂದಿಯನ್ನೂ ಸಹ ಚುನಾವಣಾ ಭದ್ರತೆಗೆ ನಿಯೋಜಿಸಲಾಗಿದೆ. ನಾಳೆ ಸಂಜೆ ೬ ಗಂಟೆಯಿಂದ ಇದೇ ೨೬ ರಾತ್ರಿ ೧೨ ಗಂಟೆಯವರೆಗೆ ಈ ಭಾಗದಲ್ಲಿ ಮದ್ಯ ಮಾರಾಟವನ್ನು ನಿಷೇಧಿಸಲಾಗಿದೆ ಬೆಂಗಳೂರು ನಗರಾದ್ಯಂತ ೧೪೪ನೇ ಸೆಕ್ಷನ್ ಜಾರಿಗೊಳಿಸಲಾಗಿದೆ ಎಂದು ಪೊಲೀಸ್ ಆಯುಕ್ತ ಬಿ.ದಯಾನಂದ್ ತಿಳಿಸಿದರು.

<><*<><>*><>

೨೦೨೪ರ ಸಾರ್ವತ್ರಿಕ ಚುನಾವಣೆಯ ನಾಲ್ಕನೇ ಹಂತದಲ್ಲಿ ಹತ್ತು ರಾಜ್ಯಗಳ ೯೬ ಕ್ಷೇತ್ರಗಳಿಗೆ ನಾಮಪತ್ರ ಸಲ್ಲಿಕೆಗೆ ಇದೇ ೨೫ರಂದು ಕೊನೆಯ ದಿನವಾಗಿದ್ದು, ಮರುದಿನ ನಾಮಪತ್ರ ಪರಿಶೀಲನೆ ನಡೆಯಲಿದೆ. ನಾಮಪತ್ರ ವಾಪಸ್ ಪಡೆಯಲು ಇದೇ ೨೯ ರಂದು ಕೊನೆಯದಿನವಾಗಿರುತ್ತದೆ. ಉತ್ತರ ಪ್ರದೇಶ್, ಮಧ್ಯಪ್ರದೇಶ್, ಮಹಾರಾಷ್ಟ್ರ, ಬಿಹಾರ್, ಜಾರ್ಖಂಡ್, ಒಡಿಶಾ, ಪಶ್ಚಿಮ ಬಂಗಾಳ, ಆಂಧ್ರಪ್ರದೇಶ, ತೆಲಂಗಾಣ ಮತ್ತು ಜಮ್ಮು-ಕಾಶ್ಮೀರದ ಲೋಕಸಭಾ ಕ್ಷೇತ್ರಗಳಿಗೆ ಮೇ ೧೩ ರಂದು ಮತದಾನ ನಡೆಯಲಿದೆ. ಮುಕ್ತ ಹಾಗೂ ನ್ಯಾಯಸಮ್ಮತ ಚುನಾವಣೆಗೆ ರಾಜ್ಯಗಳ ಮುಖ್ಯ ಚುನಾವಣಾಧಿಕಾರಿಗಳು, ವ್ಯಾಪಕ ಕ್ರಮಗಳನ್ನು ಕೈಗೊಳ್ಳುತ್ತಿದ್ದಾರೆ ಎಂದು ವರದಿಯಾಗಿದೆ.

<><*<><>*><>

ಪಶ್ಚಿಮ ಏಷ್ಯಾದಲ್ಲಿ ರಾಜಕೀಯ ಉದ್ವಿಗ್ನತೆಯನ್ನು ತಿಳಿಗೊಳಿಸುವ ಮಧ್ಯೆ ಬ್ರೆಂಟ್ ಕಚ್ಚಾ ತೈಲ ಬೆಲೆಗಳು ಇಂದು ಇಳಿಮುಖವಾಗಿವೆ. ಬ್ರೆಂಟ್ ಕ್ರೂಡ್ ಆಯಿಲ್ ಫ್ಯೂಚರ್ಸ್ ೮೬ ಡಾಲರ್ ಹಾಗೂ ೪೮ ಸೆಂಟ್‌ಗಳಲ್ಲಿ ಇಳಿಕೆಯಾದರೆ, ವೆಸ್ಟರ್ನ್ ಟೆಕ್ಸಾಸ್ ಇಂಟರ್ಮೀಡಿಯೇಟ್ ತೈಲ ದಿನದ ಅಂತ್ಯಕ್ಕೆ ೮೧ ಡಾಲರ್ ಮತ್ತು ೩೬ ಸೆಂಟ್‌ಗಳಿಗೆ ಕಡಿಮೆಯಾಗಿತ್ತು ಎಂದು ವರದಿಯಾಗಿದೆ.

<><*<><>*><>

ದುಬೈನಲ್ಲಿ ನಡೆಯುತ್ತಿರುವ ಕೊಲ್ಲಿ ರಾಷ್ಟ್ರಗಳ ಮಾಹಿತಿ ತಂತ್ರಜ್ಞಾನ, ಭದ್ರತಾ ಎಕ್ಸ್‌ಪೊ ಸಮ್ಮೇಳನದಲ್ಲಿ ಭಾರತದ ಸೈಬರ್ ಭದ್ರತಾ ಉದ್ಯಮವು ಗಮನಾರ್ಹ ಪರಿಣಾಮ ಬೀರುತ್ತಿದೆ. ಭಾರತದ ಡಾಟಾ ಭದ್ರತಾ ಮಂಡಳಿ ಈ ಕ್ಷೇತ್ರದಲ್ಲಿ ಉತ್ತಮ ಪ್ರದರ್ಶನ ಪ್ರದರ್ಶಿಸಿದ್ದು, ೨೨ ಅತ್ಯುತ್ತಮ ಕಂಪನಿಗಳು ಪಾಲ್ಗೊಂಡಿರುವುದು ವಿಶೇಷವಾಗಿದೆ.

<><*<><>*><>

ತೈವಾನ್ ನಲ್ಲಿ, ಕಳೆದ ರಾತ್ರಿ ದೇಶದ ಪೂರ್ವ ಭಾಗಗಳಲ್ಲಿ ಹಲವು ಸಲ ಭೂಕಂಪ ಸಂಭವಿಸಿದೆ. ಭೂಕಂಪದ ತೀವ್ರತೆಯು ರಿಕ್ಟರ್ ಮಾಪಕದಲ್ಲಿ ೬.೧ ರಷ್ಟು ದಾಖಲಾಗಿದೆ.

<><*<><>*><>

ವಿಶ್ವ ಬಿಲ್ಲುಗಾರಿಕೆ ಪಂದ್ಯಾವಳಿಯು, ಚೀನಾ ದೇಶದ ಶಾಂಘೈನಲ್ಲಿಂದು ಆರಂಭವಾಗಿದೆ. ಮೂರು ಬಾರಿ ಓಲಿಂಪಿಕ್ ಪ್ರಶಸ್ತಿ ವಿಜೇತೆ ದೀಪಕ್ ಕುಮಾರಿ ನೇತೃತ್ವದಲ್ಲಿ ಭಾರತ ತಂಡವನ್ನು ಪ್ರತಿನಿಧಿಸಿದ್ದಾರೆ ಎಂದು ವರದಿಯಾಗಿದೆ. ೮ ಪುರುಷರು, ೮ ಮಹಿಳೆಯರು ಸೇರಿದಂತೆ ಒಟ್ಟು ೧೬ ಜನರ ತಂಡವು, ಇದೇ ೨೮ರವರೆಗೆ ನಡೆಯಲಿರುವ ಪಂದ್ಯಾವಳಿಯಲ್ಲಿ ಪಾಲ್ಗೊಂಡಿದೆ. ಪ್ಯಾರೀಸ್ ಓಲಿಂಪಿಕ್‌ನಲ್ಲಿ ಬಿಲ್ಲುಗಾರಿಕೆಯಲ್ಲಿ ಭಾರತವನ್ನು ಮುನ್ನೆಡಿಸಿದ್ದ ದೀಪಕ್ ಕುಮಾರಿ ಮಹಿಳಾ ವಿಭಾಗದಲ್ಲಿ, ಧೀರಜ್ ಬೊಮ್ಮದೇವರ ಪುರುಷರ ವಿಭಾಗವನ್ನು ಪ್ರತಿನಿಧಿಸಿದ್ದರು. ಇವರನ್ನು ಒಳಗೊಂಡ ತಂಡವು, ವಿಶ್ವ ಬಿಲ್ಲುಗಾರಿಕೆ ಪಂದ್ಯಾವಳಿಯಲ್ಲಿ ಭಾಗಿಯಾಗಿದೆ. ಇತರ ಆಟಗಾರರಾದ ಆದಿ ಗೋಪಿಚಂದಸ್ವಾಮಿ, ಜ್ಯೋತಿ ಸುರೇಖಾ ವೆನ್ನಮ್ಮ ಅವರೂ ಸಹ ತಂಡದಲ್ಲಿ ಇರಲಿದ್ದಾರೆ.

<><*<><>*><>

ಐಪಿಎಲ್ ಟಿ-೨೦ ಕ್ರಿಕೆಟ್ ಟೂರ್ನಿಯಲ್ಲಿ ಚೆನ್ನೈನ ಎಂ.ಎ.ಚಿದಂಬರಂ ಕ್ರೀಡಾಂಗಣದಲ್ಲಿಂದು ನಡೆಯುತ್ತಿರುವ ಪಂದ್ಯದಲ್ಲಿ ಲಖನೌ ಸೂಪರ್ ಜಯಂಟ್ಸ್ ಮತ್ತು ಚೆನ್ನೈ ಸೂಪರ್ ಕಿಂಗ್ಸ್ ತಂಡಗಳು ಮುಖಾಮುಖಿಯಾಗಿವೆ. ಪ್ರಸ್ತುತ ಅಂಕಪಟ್ಟಿಯಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ನಾಲ್ಕನೇ ಸ್ಥಾನದಲ್ಲಿದ್ದರೆ, ಲಖನೌ ಸೂಪರ್ ಜಯಂಟ್ಸ್ ೫ನೇ ಸ್ಥಾನದಲ್ಲಿದೆ. ಟಾಸ್ ಗೆದ್ದ ಲಖನೌ ಸೂಪರ್ ಜಯಂಟ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಿಗ್ಗೆ ೭.೦೫ ಕ್ಕೆ <>*><>**